**Akashvani : Bangalore**
**Regional Bulletin In Kannada**
**15.03.2024 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.03.2024 / 18.40 hrs**

**<><*<><>*><>**

**ಮುಖ್ಯಾಂಶಗಳು**

**೧. ಲೋಕಸಭಾ ಚುನಾವಣೆಗೆ ನಾಳೆ ಕೇಂದ್ರ ಚುನಾವಣಾ ಆಯೋಗದಿಂದ ವೇಳಾಪಟ್ಟಿ ಪ್ರಕಟ**

**೨. ಶಕ್ತಿ ಯೋಜನೆಯಿಂದ ಪ್ರವಾಸೋದ್ಯಮಕ್ಕೆ ಪುಷ್ಟಿ -ಮುಖ್ಯಮಂತ್ರಿ ಸಿದ್ದರಾಮಯ್ಯ**

**೩. ಹಾಸನ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಯೋಜನೆಗೆ ಕೇಂದ್ರದಿಂದ ೫೭೮ ಕೋಟಿ ರೂಪಾಯಿ ಮಂಜೂರು**

**೪. ಅಲೆಮಾರಿ ಸಮುದಾಯದ ಶ್ರೇಯೋಭಿವೃದ್ಧಿಗೆ ಸರ್ಕಾರ ಬದ್ಧ - ಸಚಿವ ಸತೀಶ್ ಜಾರಕಿಹೊಳಿ**

**<><*<><>*><>**

ಮುಂಬರುವ ಲೋಕಸಭಾ ಚುನಾವಣೆಗೆ ನಾಳೆ ವೇಳಾಪಟ್ಟಿ ಪ್ರಕಟವಾಗುವ ನಿರೀಕ್ಷೆ ಇದೆ. ದೆಹಲಿಯ ವಿಜ್ಞಾನಭವನದಲ್ಲಿ ಕೇಂದ್ರ ಚುನಾವಣಾ ಆಯೋಗ ಈ ಸಂಬಂಧ ಮಾಧ್ಯಮಗೋಷ್ಠಿ ಕರೆದಿದ್ದು, ಲೋಕಸಭೆ ಹಾಗೂ ಕೆಲವು ರಾಜ್ಯಗಳ ವಿಧಾನಸಭಾ ಚುನಾವಣೆಗಳ ವೇಳಾಪಟ್ಟಿಯನ್ನು ಆಯೋಗ ಪ್ರಕಟಿಸಲಿದೆ ಎಂದು ಕೇಂದ್ರ ಚುನಾವಣಾ ಆಯೋಗದ ಮಾಧ್ಯಮ ವಿಭಾಗದ ಜಂಟಿ ನಿರ್ದೇಶಕರಾದ ಅನೂಜ್ ಚಂದಕ್ ತಿಳಿಸಿದ್ದಾರೆ. ಚುನಾವಣೆಗೆ ದಿನಾಂಕ ಪ್ರಕಟವಾದ ದಿನದಿಂದಲೇ ಮಾದರಿ ನೀತಿ ಸಂಹಿತೆ ಜಾರಿಗೆ ಬರುವ ನಿರೀಕ್ಷೆ ಇದೆ. ಈ ಮಧ್ಯೆ, ನೂತನ ಚುನಾವಣಾ ಆಯುಕ್ತರಾಗಿ ನೇಮಕಗೊಂಡಿರುವ ಗ್ಯಾನೇಶ್ ಕುಮಾರ್ ಹಾಗೂ ಸುಖ್‌ಬೀರ್ ಸಿಂಗ್ ಸಂಧು ಅವರು ಇಂದು ಅಧಿಕಾರ ವಹಿಸಿಕೊಂಡರು.

**<><*<><>*><>**

ಶಕ್ತಿ ಯೋಜನೆಯಿಂದ ರಾಜ್ಯದಲ್ಲಿ ಪ್ರವಾಸೋದ್ಯಮ ಹಾಗೂ ದೇವಾಲಯಗಳಲ್ಲಿ ಆರ್ಥಿಕತೆ ಹೆಚ್ಚಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಏರ್ಪಡಿಸಲಾಗಿದ್ದ ಗ್ಯಾರಂಟಿ ಯೋಜನೆಗಳ ಸಮಾವೇಶ ಹಾಗೂ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ ಹಿಂದುಳಿದ ವರ್ಗದ ಜನ ಹಾಗೂ ಪರಿಶಿಷ್ಟ ವರ್ಗದ ಜನರು ಸಂಕಷ್ಟಕ್ಕೆ ಒಳಗಾಗಿದ್ದರು, ಅವರನ್ನು ಮುಖ್ಯ ವಾಹಿನಿಗೆ ತರಲು ಯೋಜನೆಗಳನ್ನ ಅನುಷ್ಠಾನಗೊಳಿಸಲಾಗಿತ್ತು. ಈ ಯೋಜನೆಗಳು ಯಾವುದೇ ಜಾತಿ ಧರ್ಮ ಗಳಿಗೆ ಸೀಮಿತವಾಗದೆ ಎಲ್ಲರಿಗೂ ಸಮಾನತೆಯಿಂದ ಬಡವರಿಗೆ ನೆರವಾಗಲು ಮುಂದಾಗಿದೆ ಎಂದರು.

**<><*<><>*><>**

ಹಾಸನ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ೩೭೩ರ ಯಡೆಗೌಡನಹಳ್ಳಿಯಿಂದ ಅರ್ಜುನಹಳ್ಳಿ ವಿಭಾಗದ ೨೨.೩ ಕಿಲೋಮೀಟರ್ ಉದ್ದದ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗೆ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ೫೭೮ ಕೋಟಿ ೨೨ ಲಕ್ಷ ರೂಪಾಯಿ ಮಂಜೂರು ಮಾಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಈ ಹೆದ್ದಾರಿ ಅಭಿವೃದ್ಧಿಯಿಂದ ಚಿಕ್ಕಮಗಳೂರು, ಬೇಲೂರು, ಹಳೇಬೀಡು, ಶ್ರವಣಬೆಳಗೊಳ ನಡುವಣ ಸಂಪರ್ಕ ಸುಧಾರಣೆ ಜೊತೆಗೆ ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕವಾಗಲಿದೆ ಎಂದರು.

**<><*<><>*><>**

ನೋಂದಣಿ ಇಲಾಖೆಯನ್ನು ಮತ್ತಷ್ಟು ಜನಸ್ನೇಹಿಗೊಳಿಸುವ ಉದ್ದೇಶದಿಂದ ಬೆಂಗಳೂರಿಗೆ ಮಾತ್ರ ಸೀಮಿತವಾಗಿದ್ದ "ಎನಿವೇರ್ ನೋಂದಣಿ" - ಅಂದರೆ ರಾಜ್ಯದ ಯಾವುದೇ ಭಾಗದಲ್ಲಿ ದಾಸ್ತಾವೇಜುಗಳ ನೋಂದಣಿ ಮಾಡುವ ವ್ಯವಸ್ಥೆಯನ್ನು ರಾಜ್ಯಾದ್ಯಂತ ವಿಸ್ತರಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿದ್ದಾರೆ. ಆಯವ್ಯವಯದಲ್ಲಿ ಘೋಷಿಸಿದ ಕಾರ್ಯಕ್ರಮವನ್ನು ಒಂದು ತಿಂಗಳೊಳಗಾಗಿ ಅನುಷ್ಠಾನಕ್ಕೆ ತರಲಾಗುತ್ತಿದೆ. ಉಪ ನೋಂದಣಾಧಿಕಾರಿ ಕಛೇರಿ ಎಂದರೆ ಜನದಟ್ಟಣೆ ಸಾಮಾನ್ಯ ಎಂಬಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇದೇ ಕಾರಣಕ್ಕೆ ಬೆಂಗಳೂರಿನಲ್ಲಿ ಈಗಾಗಲೇ "ಎನಿವೇರ್ ನೋಂದಣಿ ವ್ಯವಸ್ಥೆ"ಯನ್ನು ಜಾರಿಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ರಾಜ್ಯಾದ್ಯಂತ ೮೦೦ ಹೊಸ ಏಕ ಬಳಕೆಯ ಡಯಾಲಿಸಿಸ್ ಯಂತ್ರಗಳನ್ನು ಹೊಸ ಏಜೆನ್ಸಿಯ ಮೂಲಕ ಸರ್ಕಾರಿ ಆಸ್ಪತ್ರೆಗಳಿಗೆ ಪೂರೈಕೆ ಮಾಡಲಾಗುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಹಾವೇರಿ ಜಿಲ್ಲಾಸ್ಪತ್ರೆಯಲ್ಲಿಂದು ನೂತನ ಏಕ ಬಳಕೆಯ ಡಯಾಲಿಸಿಸ್ ಘಟಕವನ್ನು ಉದ್ಘಾಟಿಸಿ, ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊಸ ಏಜೆನ್ಸಿಯ ಮೂಲಕ ಬೆಳಗಾವಿ ವಿಭಾಗದ ೫೮ ತಾಲ್ಲೂಕು ಆಸ್ಪತ್ರೆ ಹಾಗೂ ೭ ಜಿಲ್ಲಾ ಆಸ್ಪತ್ರೆಗಳಿಗೆ ಡಯಾಲಿಸಿಸ್ ಯಂತ್ರಗಳನ್ನು ನೀಡಲಾಗುತ್ತಿದೆ. ಏಕ ಬಳಕೆಯ ಡಯಾಲಿಸಿಸ್ ಯಂತ್ರಗಳಿಂದ ಸೋಂಕು ಹರಡುವುದನ್ನು ತಪ್ಪಿಸಲು ಸಾಧ್ಯವಾಗಿದ್ದು, ನಿರ್ವಹಣೆ ಸುಲಭ. ಹೊಸ ಏಜೆನ್ಸಿಯು ತಾನೇ ಡಯಾಲಿಸಿಸ್ ಯಂತ್ರಗಳನ್ನು ನಿರ್ವಹಣೆ ಮಾಡಲಿದ್ದು, ಆರೋಗ್ಯ ಇಲಾಖೆಯು ನಿರ್ವಹಣಾ ವೆಚ್ಚ ಭರಿಸಲಿದೆ ಎಂದು ವಿವರಿಸಿದರು.

**ಧ್ವನಿ: ದಿನೇಶ್ ಗುಂಡೂರಾವ್**

<><*<><>*><>

ಬೆಂಗಳೂರಿನಿಂದ ವಿಜಯಪುರ ಮತ್ತು ಬಾಗಲಕೋಟೆಗಳಿಗೆ ರೈಲು ಪ್ರಯಾಣಕ್ಕೆ ಈಗ ಸುಮಾರು ೧೪ ಗಂಟೆಗಳ ಕಾಲ ಹಿಡಿಸುತ್ತಿದ್ದು, ಇದನ್ನು ೧೦ ಗಂಟೆಗಳಿಗೆ ಇಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ರೈಲ್ವೆ ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಡಲಾಗಿದೆ. ಇದರಿಂದಾಗಿ, ವಾಯವ್ಯ ಕರ್ನಾಟಕದ ಜನರು ಬೆಂಗಳೂರಿಗೆ ಬಂದುಹೋಗಲು ಅನುಕೂಲವಾಗಲಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ. ರೈಲು ಪ್ರಯಾಣವನ್ನು ಅನುಕೂಲಕರ ಮತ್ತು ಸುಖದಾಯಕವನ್ನಾಗಿ ಮಾಡಲು ಹಾಗೂ ಮಂದಗತಿಯಲ್ಲಿ ಸಾಗುತ್ತಿರುವ ವೆಚ್ಚ ಹಂಚಿಕೆಯ ೯ ರೈಲು ಯೋಜನೆಗಳ ಸ್ಥಿತಿಗತಿ ಬಗ್ಗೆ ಚರ್ಚಿಸಲು ಬೆಂಗಳೂರಿನಲ್ಲಿಂದು ಮೂಲಸೌಕರ್ಯ ಅಭಿವೃದ್ಧಿ  ಇಲಾಖೆ ಮತ್ತು ನೈರುತ್ಯ ರೈಲ್ವೆ ಅಧಿಕಾರಿಗಳೊಂದಿಗೆ ಅವರು ಸಭೆ ನಡೆಸಿದರು. ಬಳಿಕ ಮಾತನಾಡಿದ ಸಚಿವರು, ಬೆಂಗಳೂರಿನಿಂದ ಹೊರಡುವ ರೈಲುಗಳು ಈಗ ಹುಬ್ಬಳ್ಳಿ ನಿಲ್ದಾಣಕ್ಕೆ ಹೋಗುತ್ತಿದ್ದು, ಅಲ್ಲಿ ಎಂಜಿನ್ ಬದಲಿಸಲು ೪೫ ನಿಮಿಷ ನಿಲ್ಲುತ್ತವೆ. ಬಳಿಕ, ಗದಗದಲ್ಲೂ ಹೀಗೆಯೇ ಸಮಯ ವ್ಯರ್ಥವಾಗುತ್ತಿದೆ. ಆದ್ದರಿಂದ, ರೈಲುಗಳು ಹುಬ್ಬಳ್ಳಿ ರೈಲು ನಿಲ್ದಾಣಕ್ಕೆ ಹೋಗುವ ಬದಲು ಹುಬ್ಬಳ್ಳಿ ಬೈಪಾಸ್ ಮತ್ತು ಗದಗ ಬೈಪಾಸ್ ಮೂಲಕ ಸಾಗುವ ವ್ಯವಸ್ಥೆ ಮಾಡಬೇಕಾದ ಅಗತ್ಯವಿದೆ. ಈ ನಿಟ್ಟಿನಲ್ಲಿ ಯೋಜನೆ ರೂಪಿಸಬೇಕು ಎಂದು ಅವರು ಸೂಚಿಸಿದರು.

**<><*<><>*><>**

ಅಲೆಮಾರಿ ಸಮುದಾಯದ ಶ್ರೇಯೋಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಬೆಂಗಳೂರಿನ ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದ್ದ ಕರ್ನಾಟಕ ಎಸ್ಸಿ, ಎಸ್ಟಿ ಅಲೆಮಾರಿ ವಿಮುಕ್ತ ಬುಡಕಟ್ಟು ಸಂಘಟನೆಗಳ ಒಕ್ಕೂಟದಿಂದ ಅಲೆಮಾರಿ ಸಮುದಾಯಗಳ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರ ಶೋಷಿತ ಸಮುದಾಯಗಳ ಅಭಿವೃದ್ಧಿಗೆ ಸದಾ ಶ್ರಮಿಸುತ್ತದೆ. ಸರ್ಕಾರದ ಗ್ಯಾರೆಂಟಿ ಮತ್ತು ಜನಪರ ಯೋಜನೆಗಳನ್ನು ಶೋಷಿತ ಸಮುದಾಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಯಾವುದೇ ಸಮಾಜ ಹೋರಾಟ ಮಾಡದೇ ಇದ್ದಲ್ಲಿ ಏನನ್ನೂ ಪಡೆಯಲು ಸಾಧ್ಯವಿಲ್ಲ.

ನಮ್ಮ ಸರ್ಕಾರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುತ್ತದೆ. ನಿಮ್ಮ ಶ್ರೇಯೋಭಿವೃದ್ಧಿಗೆ ಬದ್ಧ ಎಂದು ಹೇಳಿದರು. ಸಮಾವೇಶದಲ್ಲಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್. ಜಸ್ಟೀಸ್ ನಾಗಮೋಹನ್ ದಾಸ್, ಸಂಘದ ಅಧ್ಯಕ್ಷ ಆದರ್ಶ ಯಲ್ಲಪ್ಪ, ಎಸ್ಸಿ ಎಸ್ಟಿ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ ಜಿ, ಮತ್ತಿತರರು ಉಪಸ್ಥಿತರಿದ್ದರು.

<><*<><>*><>

ವ್ಯಾಪಾರ ಹಾಗೂ ಕೌಶಲ್ಯ ಕೇಂದ್ರಿತ ಉದ್ದಿಮೆ ಹಾಗೂ ಇತರೆ ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ತಮ್ಮನ್ನು ತೊಡಗಿಸಿಕೊಂಡು ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದು ವಿದ್ಯುನ್ಮಾನ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ.ಏಕ್‌ರೂಪ್ ಕೌರ್ ತಿಳಿಸಿದ್ದಾರೆ. ಬೆಂಗಳೂರಿನ ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿ ಮೂರು ದಿನಗಳ ಸ್ವಾವಲಂಬನ್ ಮೇಳ ಮತ್ತು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರು ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ಸ್ವಂತ ಉದ್ಯಮ ಹೊಂದಿ ಮುಖ್ಯವಾಹಿನಿಗೆ ಬರಬೇಕು ಎಂದರು.

<><*<><>*><>

ಇಂಧನ ಸಚಿವ ಕೆ.ಜೆ.ಜಾರ್ಜ್ ಅವರು ಇಂದು ಪಾವಗಡದಲ್ಲಿ ಕರ್ನಾಟಕ ಸೌರಶಕ್ತಿ ಅಭಿವೃದ್ಧಿ ನಿಗಮದ "ಸೂರ್ಯಮಿತ್ರ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮದಲ್ಲಿ ಕೌಶಲ್ಯಾಭಿವೃದ್ಧಿ ಕೋರ್ಸ್‌ಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿದರು. ನಂತರ, ಸಚಿವರು ತುಮಕೂರು ಜಿಲ್ಲೆಯ ರಾಯಪೇಟೆ ಗ್ರಾಮಕ್ಕೆ ಭೇಟಿ ನೀಡಿ, ಉದ್ದೇಶಿತ ೨ ಸಾವಿರ ಮೆಗಾವ್ಯಾಟ್ ಸೌರ ವಿದ್ಯುತ್ ಪಾರ್ಕ್‌ಗಾಗಿ ಸುತ್ತಮುತ್ತಲಿನ ಗ್ರಾಮಗಳಲ್ಲಿ ಸ್ಥಳ ಪರಿಶೀಲನೆ ನಡೆಸಿದರು.

<><*<><>*><>

ಕರ್ನಾಟಕ ರಾಜ್ಯ ಬೇಳೆ ಕಾಳು ಅಭಿವೃದ್ಧಿ ಮಂಡಳಿಯು ದ್ವಿದಳ ಧಾನ್ಯಗಳ ಮೌಲ್ಯ ವರ್ಧನೆ ಹಾಗೂ ಬ್ರಾಂಡಿಗ್ ಬಗ್ಗೆ ಹೆಚ್ಚು ಆದ್ಯತೆ ನೀಡಿ ಸಂಸ್ಥೆಯನ್ನು ಇನ್ನಷ್ಟು ಲಾಭದಾಯಕ ಮತ್ತು ಸುಸ್ಥಿರಗೊಳಿಸುವಂತೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಮಂಡಳಿಯ ಪ್ರಗತಿ ಪರಿಶೀಲನೆ ನಡೆಸಿದ ಅವರು, ತೊಗರಿಬೇಳೆ ಜೊತೆಗೆ ಹೆಸರುಕಾಳು, ಉದ್ದು ಹಾಗೂ ಕಡಲೆ ಕಾಳುಗಳನ್ನು ಭೀಮಾ ಪಲ್ಸ್ ಮಾದರಿಯಲ್ಲಿಯೇ ಬ್ರಾಂಡಿಗ್ ಮಾಡಿ ಮಾರುಕಟ್ಟೆಗೆ ಬಿಡುಗಡೆ ಮಾಡುವಂತೆ ಸೂಚಿಸಿದರು.

<><*<><>*><>

ಮಹಿಳಾ ಪ್ರಿಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಮುಂಬಯ್ ಇಂಡಿಯನ್ಸ್ ತಂಡವನ್ನು ಇಂದು ಎಲಿಮಿನೆಟರ್ ಪಂದ್ಯದಲ್ಲಿ ಎದುರಿಸಲಿದೆ. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ರಾತ್ರಿ ೭:೩೦ಕ್ಕೆ ಪಂದ್ಯ ಆರಂಭವಾಗಲಿದ್ದು, ಈ ಪಂದ್ಯದಲ್ಲಿ ವಿಜೇತವಾಗುವ ತಂಡವು ಭಾನುವಾರ ನಡೆಯುವ ಫೈನಲ್ಸ್ ಪಂದ್ಯದಲ್ಲಿ ದೆಹಲಿ ಕ್ಯಾಪಿಟಲ್ಸ್ ವಿರುದ್ಧ ಸೆಣೆಸಲಿದೆ. ಮಾರ್ಚ್ ೧೨ ರಂದು ಉಭಯ ತಂಡಗಳ ನಡುವೆ ನಡೆದ ಕೊನೆಯ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಏಳು ವಿಕೆಟ್‌ಗಳಿಂದ ಮುಂಬೈ ಇಂಡಿಯನ್ಸ್ ಅನ್ನು ಸೋಲಿಸಿತ್ತು. ತನ್ನ ಅದ್ಭುತ ಆಲ್ ರೌಂಡರ್ ಪ್ರದರ್ಶನಕ್ಕಾಗಿ ಬೆಂಗಳೂರಿನ ಎಲಿಸ್ ಪೆರ್ರಿ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದಿದ್ದರು.

<><*<><>*><>

೧. ಮಹಿಳೆಯರು ಒಂದೇ ಕ್ಷೇತ್ರಕ್ಕೆ ಮೀಸಲಿರದೇ ತಂತ್ರಜ್ಞಾನ, ಆರ್ಥಿಕ, ರಾಜಕೀಯ, ರಕ್ಷಣೆ ಸೇರಿದಂತೆ ಪ್ರತಿಯೊಂದು ವಲಯದಲ್ಲೂ ತಮ್ಮದೇ ಆದ ಛಾಪು ಮೂಡಿಸಿದ್ದಾರೆ ಎಂದು ಬಾಗಲಕೋಟೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ ಹೇಳಿದ್ದಾರೆ.

೧.	೧೮ ವರ್ಷ ತುಂಬಿದ ಪ್ರತಿಯೊಬ್ಬರೂ ಮತದಾನದಲ್ಲಿ ಪಾಲ್ಗೊಂಡು ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಸಿದ್ಧಗಂಗಾ ಮಠಾಧ್ಯಕ್ಷರಾದ ಸಿದ್ಧಲಿಂಗ ಸ್ವಾಮೀಜಿ ತುಮಕೂರಿನಲ್ಲಿಂದು ಕರೆ ನೀಡಿದ್ದಾರೆ.

೨.	ಚಿಕ್ಕಬಳ್ಳಾಪುರ ಹೊರವಲಯದ ಚದುಲಪುರದ ಕೆನರಾ ಬ್ಯಾಂಕ್ ಗ್ರಾಮೀಣಾಭಿವೃದ್ಧಿ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಉಚಿತ ವೃತ್ತಿ ತರಬೇತಿ ಶಿಬಿರ ಆಯೋಜಿಸಲಾಗಿದೆ. ೧೮ ರಿಂದ ೪೫ ವರ್ಷ ವಯೋಮಾನದೊಳಗಿನವರು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೨೫ ಕ್ಕೆ <>*><>**